# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **391 (387)** |
| **ಸದಸ್ಯರ ಹೆಸರು** | **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.,<br>(ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **10-07-2023** |
| **ಉತ್ತರಿಸಬೇಕಾದ ಸಚಿವರು** | **ಉನ್ನತ ಶಿಕ್ಷಣ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಯು ಪ್ರಸ್ತುತ ಯಾವ ಹಂತದಲ್ಲಿದೆ; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/2019, ದಿನಾಂಕ: 26.08.2021 ರಲ್ಲಿ ಹೊರಡಿಸಿದೆ. ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ, ಮೆರಿಟ್ ಆಧಾರದ ಮೇಲೆ ಆಯ್ಕೆಯಾದ ಅರ್ಹ ಅಭ್ಯರ್ಥಿಗಳ ಅಂತಿಮ ಆಯ್ಕೆಪಟ್ಟಿಯು ಸರ್ಕಾರದ ಪರಿಶೀಲನೆಯಲ್ಲಿದ್ದು, ಈ ಸಂಬಂಧ ಕಲ್ಯಾಣ ಕರ್ನಾಟಕ ವೃಂದಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಆಡಳಿತ ನ್ಯಾಯ ಮಂಡಳಿಯಲ್ಲಿ ಮೊಕದ್ದಮೆ ದಾಖಲಾಗಿದ್ದು, ತಡೆಯಾಜ್ಞೆ ನೀಡಲಾಗಿದೆ. ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ಆದೇಶದಂತೆ ಕ್ರಮವಹಿಸಲಾಗುವುದು. |
| ಆ) | ಸದರಿ 1242 ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆಯು 2021ನೇ ವರ್ಷದಲ್ಲಿ ಆರಂಭಗೊಂಡು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಂತಿಮ ಆಯ್ಕೆ ಪಟ್ಟಿಯನ್ನು ಈ ವರ್ಷದ ಮಾರ್ಚ್‌ನಲ್ಲಿ ಪ್ರಕಟಿಸಿ, ಈಗಾಗಲೇ ಸರ್ಕಾರಕ್ಕೆ ಸಲ್ಲಿಸಿದ್ದರೂ ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ಇದುವರೆಗೂ ನೇಮಕಾತಿ ಆದೇಶ ನೀಡದಿರಲು ಕಾರಣಗಳೇನು; | |
| ಇ) | ಜುಲೈ-ಆಗಸ್ಟ್‌ನಿಂದ ಆರಂಭವಾಗುವ ಶೈಕ್ಷಣಿಕ ವರ್ಷಕ್ಕೂ ಮೊದಲೇ ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡಿ ಆ ಮೂಲಕ ಅವರು ಸೇವೆ ಸಲ್ಲಿಸಲು ಅನುವು ಮಾಡಿಕೊಡಲಾಗುವುದೇ? | |

ಇಡಿ 152 ಡಿಸಿಇ 2023

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು